# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

**ವಿಶೇಷ ರಾಜ್ಯ ಪತ್ರಿಕೆ**

| ಭಾಗ – ೧<br>**Part – I** | ಬೆಂಗಳೂರು, ಬುಧವಾರ, ೨೯, ಏಪ್ರಿಲ್, ೨೦೨೬ (ವೈಶಾಖ, ೦೯, ಶಕವರ್ಷ, ೧೯೪೮)<br>**BENGALURU, WEDNESDAY, 29, APRIL, 2026 ( VAISHAKHA , 09, SHAKAVARSHA, 1948)** | ನಂ. ೩೪೦<br>**No. 340** |
|---|---|---|


## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಚಿಕ್ಕಮಗಳೂರು ನಗರದ ಅಮೃತ್ ಸಿಟಿ ಯೋಜನೆ ಅಡಿಯಲ್ಲಿ ಜಿಐಎಸ್ ಆಧಾರಿತ ಮಹಾಯೋಜನೆ (ಪರಿಷ್ಕೃತ-II) ಗೆ ಅಂತಿಮ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ನಅಇ 233 ಮೈಅಪ್ರಾ 2025, ದಿನಾಂಕ:04.07.2025.
2. ಆಯುಕ್ತರು, ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ಚಿಕ್ಕಮಗಳೂರು ರವರ ಪತ್ರ ಸಂಖ್ಯೆ:ನಅಪ್ರಾಚಿಮ/ನಯೋ/ ಮ.ಯೋ.ನ.ಅ/ 2025-26/3536, ದಿನಾಂಕ:04.03.2026.
3. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು ರವರ ಏಕ ಕಡತ ಸಂಖ್ಯೆ:DTCP 1 MPF 2021-22, ದಿನಾಂಕ: 17.03.2026.

******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ ಚಿಕ್ಕಮಗಳೂರು ನಗರದ ಅಮೃತ್ ಸಿಟಿ ಯೋಜನೆ 1.0 ಅಡಿಯಲ್ಲಿ ಜಿಐಎಸ್ ಆಧಾರಿತ ಮಹಾಯೋಜನೆ(ಪರಿಷ್ಕೃತ-II)ಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಪತ್ರದಲ್ಲಿ ಆಯುಕ್ತರು, ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ಚಿಕ್ಕಮಗಳೂರು ಇವರು ಚಿಕ್ಕಮಗಳೂರು ನಗರದ ಅಮೃತ್ ಸಿಟಿ ಯೋಜನೆ ಅಡಿಯಲ್ಲಿ ಜಿಐಎಸ್ ಆಧಾರಿತ ಮಹಾಯೋಜನೆ(ಪರಿಷ್ಕೃತ-II)ಗೆ ಅಂತಿಮ ಅನುಮೋದನೆ ನೀಡುವ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(1) ಮತ್ತು (2) ರನ್ವಯ ಅಗತ್ಯ ಕ್ರಮ ಜರುಗಿಸಿ ಚಿಕ್ಕಮಗಳೂರು ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ (ಪರಿಷ್ಕೃತ-II)ಗೆ ಅಂತಿಮವನ್ನು ಸಿದ್ದಪಡಿಸಿ ಮಹಾಯೋಜನೆ ನಕ್ಷೆಗಳು ಹಾಗೂ ವರದಿಯನ್ನು ಶಿಫಾರಸ್ಸಿನೊಂದಿಗೆ ಸರ್ಕಾರದ ಅನುಮೋದನೆಗೆ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರನ್ನು ಕೋರಿರುತ್ತಾರೆ.

ಮೇಲೆ ಓದಲಾದ (3)ರ ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತದಲ್ಲಿ, ಚಿಕ್ಕಮಗಳೂರು ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು 2011 ರಲ್ಲಿ 131079 ಇದ್ದು, 20 ವರ್ಷಗಳ ಯೋಜನಾ ಅವಧಿಗೆ ಅಂದರೆ, 2041 ನೇ ಇಸವಿಗೆ ಜನಸಂಖ್ಯೆಯು ಸುಮಾರು 250000 ಆಗಬಹುದೆಂದು ಅಂದಾಜಿಸಿ ಮಹಾಯೋಜನೆ(ಪರಿಷ್ಕೃತ-II)ಯನ್ನು ತಯಾರಿಸಲಾಗಿದೆ. ಹಿಂದಿನ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ಮಹಾಯೋಜನೆಯಲ್ಲಿ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 6752.68 ಹೆಕ್ಟೇರ್ ವಿಸ್ತೀರ್ಣದಲ್ಲಿ 3435.09 ಹೆಕ್ಟೇರ್ ಪ್ರದೇಶವನ್ನು ನಗರೀಕರಣ ಎಲ್ಲೆಯೆಂದು ಪ್ರಸ್ತಾಪಿಸಿ ಯೋಜನೆಯನ್ನು ರೂಪಿಸಲಾಗಿದೆ. ಚಿಕ್ಕಮಗಳೂರು ಪಟ್ಟಣದ ಜನಸಂಖ್ಯೆ, ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿ, ಹಾಲಿ ಬೆಳವಣಿಗೆಯ ಗತಿ, ರಸ್ತೆಗಳ ಹಾಲಿ ಪರಿಚಲನೆ ವ್ಯವಸ್ಥೆಯ ಸಮಸ್ಯೆಗಳನ್ನು ವಿಶ್ಲೇಷಿಸಿ ಯೋಜನಾ ತತ್ವಗಳಿಗನುಗುಣವಾಗಿ ಹಾಗೂ ಮಹಾಯೋಜನೆ ತಯಾರಿಕೆ ಬಗ್ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರಲ್ಲಿ ನಿಗಧಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಬೆಳವಣಿಗೆಗೆ, ವಿವಿಧ ಉಪಯೋಗಗಳಿಗೆ ಬೇಕಾಗಬಹುದಾದ ಭೂಮಿಯನ್ನು ಈ ಕೆಳಗಿನಂತೆ ಕಾಯ್ದಿರಿಸಿ ಮಹಾಯೋಜನೆ ತಯಾರಿಸಲಾಗಿದೆ.

ಪಟ್ಟಣದ ಯೋಜಿತ ಬೆಳವಣಿಗೆಗಾಗಿ ನಗರೀಕರಣ ಎಲ್ಲೆ ಎಂದು ಪ್ರಸ್ತಾಪಿಸಿರುವ 3435.09 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 1762.89 ಹೆಕ್ಟೇರ್ (ಶೇ.51.32), ವಾಣಿಜ್ಯಕ್ಕಾಗಿ 195.01 ಹೆಕ್ಟೇರ್ (ಶೇ.5.68), ಕೈಗಾರಿಕೆಗಾಗಿ 125.57 ಹೆಕ್ಟೇರ್ (ಶೇ.3.66), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 297.93 ಹೆಕ್ಟೇರ್ (ಶೇ.8.67), ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 384.34 ಹೆಕ್ಟೇರ್ (ಶೇ.11.19), ಸಾರ್ವಜನಿಕ ಉಪಯುಕ್ತತೆಗಾಗಿ 9.62 ಹೆಕ್ಟೇರ್ (ಶೇ.0.28) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 659.73 ಹೆಕ್ಟೇರ್(ಶೇ.19.20) ಪ್ರದೇಶವನ್ನು ಮೀಸಲಿಟ್ಟು ಭೂ ಉಪಯೋಗವನ್ನು ನಿಗಧಿಪಡಿಸಲಾಗಿದೆ. ಮಹಾಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾಯೋಜನೆ(ಪ-II) ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆ ನೀಡಲು ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರು ಸದರಿ ಪ್ರಸ್ತಾವನೆಯನ್ನು ಪರಿಗಣಿಸುವಂತೆ ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ನಅಇ 124 ಮೈಅಪ್ರಾ 2026(ಇ),**
**ಬೆಂಗಳೂರು, ದಿನಾಂಕ:29.04.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಚಿಕ್ಕಮಗಳೂರು ನಗರದ ಅಮೃತ್ ಸಿಟಿ ಯೋಜನೆ ಅಡಿಯಲ್ಲಿ ಜಿಐಎಸ್ ಆಧಾರಿತ ಮಹಾಯೋಜನೆ(ಪರಿಷ್ಕೃತ-II)ಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ 13(3) ರನ್ವಯ ಅಂತಿಮ ಅನುಮೋದನೆಯನ್ನು ನೀಡಲಾಗಿದೆ. ಮಹಾಯೋಜನೆ(ಪರಿಷ್ಕೃತ-II)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

**ಷರತ್ತು:** ಈ ಆದೇಶದ ದಿನಾಂಕದಿಂದ ಒಂದು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH